<u>ಕರ್ನಾಟಕ ಸರ್ಕಾರದ ನಡವಳಿಗಳು</u>

<u>ವಿಷಯ:-</u> 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ಇಲಾಖೆಯ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಡಿ ಶಿವಾರ ಪಟ್ಟಣದ ವಿಶ್ವಕರ್ಮ ಶಿಲ್ಪಕಲಾ ಸಂಸ್ಥೆಗೆ ನೀಡಿರುವ ಅನುದಾನದಲ್ಲಿ ಎರಡು, ಮೂರು ಮತ್ತು ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:-

1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ: 05.04.2021, 30.09.2021 ಹಾಗೂ 31.12.2021.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂಡಿ 05 ಬಿಎಂಎಸ್ 2021, ದಿನಾಂಕ: 22.06.2021 ಹಾಗೂ ತಿದ್ದುಪಡಿ ದಿನಾಂಕ: 30.07.2021 .
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಬಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕವಿಸಅನಿ /ಸಿಆರ್-32/2020-21, ದಿನಾಂಕ: 02.02.2022.

*******

<u>ಪ್ರಸ್ತಾವನೆ:-</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಎರಡು,ಮೂರು ಮತ್ತು ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನಿಗಮಗಳಿಗೆ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಶಿವಾರ ಪಟ್ಟಣ ಗ್ರಾಮದಲ್ಲಿ ಅಮರಶಿಲ್ಪಿ ಜಕಣಾಚಾರಿ ಶಿರೋನಾಮದಲ್ಲಿ ಶಿಲ್ಪಕಲಾ ಕೇಂದ್ರ ಸ್ಥಾಪಿಸಲು 2019-20ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4225-03-277-2-12(132) ರಲ್ಲಿ ರೂ.1000.00 ಲಕ್ಷಗಳನ್ನು ಒದಗಿಸಲಾಗಿರುತ್ತದೆ. 2021-22ನೇ ಸಾಲಿನಲ್ಲಿ ಆಯವ್ಯಯದಲ್ಲಿ ರೂ.300.00 ಲಕ್ಷಗಳನ್ನು ಒದಗಿಸಿದ್ದು, ಅದರಲ್ಲಿ ಮೊದಲನೇ ಕಂತಿನ ಅನುದಾನವಾಗಿ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಬಾಕಿ ರೂ.250.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ 2021-22ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದ ಅನುದಾನದಲ್ಲಿ ಎರಡು,ಮೂರು ಮತ್ತು ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂಡಿ 05 ಬಿಎಂಎಸ್ 2021</u>**
**<u>ಬೆಂಗಳೂರು, ದಿನಾಂಕ: 22-03-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರಿಂದ ಅನುಷ್ಠಾನಗೊಳುತ್ತಿರುವ ಶಿವಾರಪಟ್ಟಣದ ವಿಶ್ವಕರ್ಮ ಶಿಲ್ಪಕಲಾ ಸಂಸ್ಥೆಯ ಲೆಕ್ಕಶೀರ್ಷಿಕೆ: 4225-03-277-2-12(132) ರಡಿ 2021-22ನೇ ಸಾಲಿನ ಅಯವ್ಯಯದಲ್ಲಿ

---2

22/03/22

ಒದಗಿಸಿದ ಅನುದಾನದಲ್ಲಿ ಈ ಕೆಳಕಂಡಂತೆ ಎರಡು, ಮೂರು ಮತ್ತು ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ.250.00ಲಕ್ಷ (ಎರಡು ನೂರ ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಗೆ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕಾರ್ಯಕ್ರಮ/ ಲೆಕ್ಕಶೀರ್ಷಿಕೆ | 2021-22ನೇ ಸಾಲಿಗೆ ಒದಗಿಸಿರುವ ಆಯವ್ಯಯ | ಮೊದಲನೇ ತ್ರೈಮಾಸಿಕದಲ್ಲಿ ಬಿಡುಗಡೆಯಾದ ಮೊತ್ತ | ಎರಡನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಮೊತ್ತ | ಮೂರನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಮೊತ್ತ | ನಾಲ್ಕನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಮೊತ್ತ |
|---|---|---|---|---|---|
| ಶಿವಾರ ಪಟ್ಟಣದ ವಿಶ್ವಕರ್ಮ ಶಿಲ್ಪಕಲಾ ಸಂಸ್ಥೆ: 4225-03-277-2-12 (132) | 300.00 | 50.00 | 83.00 | 83.00 | 84.00 |

**<u>ಷರತ್ತುಗಳು:</u>**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರು ಹಣವನ್ನು ಡ್ರಾ ಮಾಡಲು ಸಲ್ಲಿಸುವ ಸಂಬಂಧಿಸಿದ ಲೆಕ್ಕಶೀರ್ಷಿಕೆವಾರು ಸ್ವೀಕರ್ತನ ರಶೀದಿ ಬಿಲ್ಲುಗಳಿಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೇಲು ರುಜು ಪಡೆದು ಹಣ ಡ್ರಾ ಮಾಡತಕ್ಕದ್ದು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಕಡ್ಡಾಯವಾಗಿ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಹಾಗೂ ನಿಯಮ 2000ರ ನಿಬಂಧನೆಗಳನ್ನು ಪಾಲಿಸತಕ್ಕದ್ದು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಸದರಿ ಯೋಜನೆಯ ನಿಯಮಾನುಸಾರ ಅನುಷ್ಠಾನಕ್ಕೆ ಕೂಡಲೇ ಕ್ರಿಯಾ ಯೋಜನೆಯನ್ನು ಸಲ್ಲಿಸತಕ್ಕದ್ದು. ಅನುಮೋದಿತ ಕ್ರಿಯಾ ಯೋಜನೆಯನ್ನು ಕಡ್ಡಾಯವಾಗಿ ಸಂಬಂಧಪಟ್ಟ ನಿಗಮದ ಜಾಲತಾಣಗಳಲ್ಲಿ ಪ್ರಚುರಪಡಿಸುವುದು.
4. ಸರ್ಕಾರದಿಂದ ಬಿಡುಗಡೆಗೊಳಿಸಿರುವ ಅನುದಾನದ ವಿವರಗಳನ್ನು ನಿಗಮದ ಆಡಳಿತ ಮಂಡಳಿ ಮುಂದೆ ಮಾಹಿತಿಗಾಗಿ ಕಡ್ಡಾಯವಾಗಿ ಮಂಡಿಸುವುದು. ವಿಷಯಸೂಚಿ, ಕ್ರಿಯಾ ಯೋಜನೆ ಹಾಗೂ ನಡವಳಿಯನ್ನು ನಿಗಮದ ಜಾಲತಾಣದಲ್ಲಿ ಪ್ರಚುರಪಡಿಸುವುದು.
5. ಬಿಡುಗಡೆ ಮಾಡಿದ ಅನುದಾನವನ್ನು ಯಾವುದೇ ಬೇರೆ ಉದ್ದೇಶಕ್ಕೆ ಖರ್ಚು ಮಾಡಬಾರದು. ಹಣಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಸಲ್ಲಿಸುವುದು.

3 —

22/03/22